# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ. ಎನ್. ರವಿಕುಮಾರ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 240

ಉತ್ತರಿಸಬೇಕಾದ ದಿನಾಂಕ : 02.02.2021

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸಹಕಾರ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಮೀಸಲಾತಿ ನೀಡುವ ಕುರಿತು ಸರ್ಕಾರದ ನಿಲುವೇನು; | ರಾಜ್ಯದ ಸಹಕಾರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳಲ್ಲಿ ಬಿಡಿ ವ್ಯಕ್ತಿಗಳನ್ನು ಸದಸ್ಯರನ್ನಾಗಿ ಉಳ್ಳ ಮತ್ತು ಅಂಥ ವರ್ಗದ ಅಥವಾ ಗುಂಪಿನ ಸದಸ್ಯರನ್ನು ಹೊಂದಿರುವ ಪ್ರತಿಯೊಂದು ಸಹಕಾರ ಸಂಘದ, ಮಂಡಲಿಯಲ್ಲಿ ಅಂತಹ ಮೀಸಲಾತಿಯ ಅವಕಾಶವನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ.28-ಎ(3) ರಲ್ಲಿ ಒದಗಿಸಲಾಗಿರುತ್ತದೆ.<br><br>ಕಲಂ-28-ಎ(3) ರ ಉಧೃತಭಾಗ ಈ ಕೆಳಕಂಡಂತಿರುತ್ತದೆ.<br><br>(3) [ ಪ್ರತಿ ಸಹಕಾರ ಸಂಘದ] [ ಮಂಡಲಿ] ಯಲ್ಲಿ-<br><br>(i) ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗಳಿಗೆ ಒಂದು ಸ್ಥಾನವನ್ನು ಚುನಾವಣೆ ಮೂಲಕ ಭರ್ತಿ ಮಾಡತಕ್ಕದ್ದು ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳಿಗೆ ಒಂದು ಸ್ಥಾನವನ್ನು ಚುನಾವಣೆ ಮೂಲಕ ಭರ್ತಿ ಮಾಡತಕ್ಕದ್ದು. |
| ಆ | ರಾಜ್ಯದಲ್ಲಿ ಸಹಕಾರ ಕ್ಷೇತ್ರದಲ್ಲಿ ನಡೆಯುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು.) | ರಾಜ್ಯದಲ್ಲಿ ಸಹಕಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಜಿಲ್ಲಾವಾರು ವಿವರವನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಇ | ಸಹಕಾರಿ ತತ್ವದಡಿ ನಡೆಯುವ ಸಕ್ಕರೆ ಕಾರ್ಖಾನೆಗಳ ಕಳೆದ 3 ವರ್ಷಗಳಲ್ಲಿ ಎಷ್ಟು ಮೊತ್ತದ ಲಾಭಾಂಶವನ್ನು ಸದಸ್ಯರಿಗೆ ವಿತರಿಸಿದೆಯೇ? (ಕಾರ್ಖಾನೆವಾರು ವಿವರ ನೀಡುವುದು) | ರಾಜ್ಯದ ಎಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆಗಳು ಕ್ರೋಢೀಕೃತ ನಷ್ಟದಲ್ಲಿ ನಡೆಯುತ್ತಿರುವುದರಿಂದ ಕಳೆದ 3 ವರ್ಷಗಳಲ್ಲಿ ಸದಸ್ಯರಿಗೆ ಯಾವುದೇ ಲಾಭಾಂಶವನ್ನು ವಿತರಿಸಿರುವುದಿಲ್ಲ. |

ಸಂಖ್ಯೆ: ಸಿಒ 07 ಪಿಎಂಸಿ 2021

(ಎಸ್.ಟಿ. ಸೋಮಶೇಖರ್)

ಸಹಕಾರ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದಶ್ರೀ ಎಸ್. ರವಿಕುಮಾರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 240ಕ್ಕೆ **ಅನುಬಂಧ**

**ಜಿಲ್ಲಾವಾರು ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳ ವಿವರಗಳು:**

| ಕ್ರ. ಸಂ | ಕಾರ್ಖಾನೆಯ ಹೆಸರು ಮತ್ತು ವಿಳಾಸ |
|---|---|
| **ಬೆಳಗಾವಿ ಜಿಲ್ಲೆ** | |
| 1 | ಚಿದಾನಂದ ಬಸಪ್ರಭು ಕೋರೆ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಚಿಕ್ಕೋಡಿ ತಾ॥, ಬೆಳಗಾವಿ ಜಿಲ್ಲೆ |
| 2 | ಘಟಪ್ರಭಾ ಸಹಕಾರಿ ಸಕ್ಕರೆಕಾರ್ಖಾನೆ ನಿ., ಸಂಗನಕೇರಿ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 3 | ಹಾಲಸಿದ್ದನಾಥ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ನಿಪ್ಪಾಣಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 4 | ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಂಕೇಶ್ವರ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 5 | ಕೃಷ್ಣಾ ಸಹಕಾರಿ ಸಕ್ಕರೆಕಾರ್ಖಾನೆ ನಿ., ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 6 | ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಎಂ.ಕೆ. ಹುಬ್ಬಳ್ಳಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 7 | ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಿದ್ದಸಮುದ್ರ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 8 | ಸಂಗಮ್ ಸಹಕಾರಿ ಸಕ್ಕರೆಕಾರ್ಖಾನೆ ನಿ., ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ. |
| 9 | ದಿ ಮಾರ್ಕಂಡೇಯ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕಾಕತಿ, ಬೆಳಗಾವಿ ಜಿಲ್ಲೆ. |
| **ಬಾಗಲಕೋಟೆಜಿಲ್ಲೆ** | |
| 10 | ರೈತರ ಸಸಕಾನಿ, ರನ್ನಾನಗರ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ |
| **ವಿಜಯಪುರ ಜಿಲ್ಲೆ** | |
| 11 | ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕೃಷ್ಣಾನಗರ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ |
| 12 | ಶ್ರೀ ಭೀಮಾಶಂಕರ ಸಸಕಾ ನಿ., ಮರಗೂರು,ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ |
| **ಬೀದರ್ ಜಿಲ್ಲೆ** | |
| 13 | ಮಹಾತ್ಮಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಚೆಕ್‌ಮತ್, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ |
| 14 | ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಇಮಾಂಪುರ, ಬೀದರ್ ತಾಲ್ಲೂಕು ಮತ್ತು ಜಿಲ್ಲೆ |